## ಕರ್ನಾಟಕ ಸರಕಾರದ ನಡುವಳಿಕೆಗಳು

ವಿಷಯ:- ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಮದಬಾವಿ ಗ್ರಾಮದ ಐನಾಪೂರ ಏತ ನೀರಾವರಿ ಯೋಜನೆಯ 2ನೇ ಹಂತ ಕಿ.ಮೀ. 10 ಮತ್ತು 20 ರಲ್ಲಿ ಬರುವ ಕಾಲುವೆ ನಿರ್ಮಾಣಕ್ಕಾಗಿ ಜಮೀನು ಭೂಸ್ವಾಧೀನ ಪಡಿಸಿಕೊಳ್ಳುತ್ತಿರುವ ಪ್ರಕರಣಗಳಿಗೆ ಪುನರವಸತಿ ಮತ್ತು ಪುನರವ್ಯವಸ್ಥೆಯ ಕರಡು ಯಾದಿಯನ್ನು ಅನುಮೋದಿಸುವ ಕುರಿತು.

ಓದಲಾಗಿದೆ: 1} ಭೂಸ್ವಾಧೀನ ಕಾಯ್ದೆ 2013ರ ಕಲಂ 11(1) ಕ್ಕೆ ಅನುಸಾರವಾಗಿ ಹೊರಡಿಸಲಾಗಿರುವ ಅಧಿಸೂಚನೆ ದಿ: 16-05-2015

2} ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಕುರಿತು.

3}ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ ಪುನರ್ವಸತಿ ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರವರು ಇವರ ಪತ್ರ ದಿನಾಂಕ: 05-05-2016.

-000-

ಆದೇಶ ಸಂ: ಆಯುಕ್ತರು/ಭೂಸ್ವಾ/ಸಿ.ಆರ್- 01 /2016-17 139 ದಿನಾಂಕ: 25-05-2016.

ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ ಪುನರ್ವಸತಿ ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರವರಿಂದ ಬಂದಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸಾರ್ವಜನಿಕ ಉದ್ದೇಶಕ್ಕಾಗಿ ಹಿಪ್ಪರಗಿ ಆಣೆಕಟ್ಟು ಯೋಜನೆಯಡಿಯಲ್ಲಿ ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಮದಬಾವಿ ಗ್ರಾಮದ ಐನಾಪೂರ ಏತ ನೀರಾವರಿ ಯೋಜನೆಯ 2ನೇ ಹಂತ ಕಿ.ಮೀ. 10 ಮತ್ತು 20 ರಲ್ಲಿ ಬರುವ ಕಾಲುವೆ ನಿರ್ಮಾಣಕ್ಕಾಗಿ ಜಮೀನು ಸ್ವಾಧೀನ ಪಡಿಸುತ್ತಿರುವ ಪ್ರಕರಣಗಳಿಗೆ ಒಟ್ಟು 01ಎ-14ಗುಂ ಕ್ಷೇತ್ರದ ನೂತನ ಕಾಯ್ದೆಯ ಕಲಂ 16(2) ನೇದ್ದರ ಮೇರೆಗೆ ಗಣತಿ ಕಾರ್ಯವನ್ನು ಕೈಗೊಂಡು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಯೋಜನೆಯ ಯಾದಿಯನ್ನು ತಯಾರಿಸಿದ್ದಾರೆ.

ವಿಶೇಷ ಭೂಸ್ವಾಧೀನಾಧಿಕಾರಿಗಳು, ಹಿಪ್ಪರಗಿ ಆಣೆಕಟ್ಟು ಯೋಜನೆ, ಅಥಣಿ ಇವರನ್ನು ಈ ಯೋಜನೆಗೆ ಕಾರ್ಯವನ್ನು ನಿರ್ವಹಿಸಲು ನೇಮಿಸಲಾಗಿದೆ ಮತ್ತು ಸ್ವತ್ತುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲು ಆದೇಶಿಸುವ ಅಧಿಕಾರವನ್ನು ನೀಡಲಾಗಿದೆ.

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಅನುಗುಣವಾಗಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು ಹಾಗೂ ಭೂಸ್ವಾಧೀನ ಕಾಯ್ದೆ 2013ರ ಕಲಂ 45 ರಡಿ ಪ್ರಕರಣದಲ್ಲಿ ಸದರಿ ಭೂಸ್ವಾಧೀನ ಪ್ರಕರಣದಲ್ಲಿ ಒಳಗೊಂಡ ಕ್ಷೇತ್ರವು 100 ಎಕರೆಗಿಂತ ಕಡಿಮೆ ಇರುವುದರಿಂದ ಅನ್ವಯಿಸುವುದಿಲ್ಲ.

ನೂತನ ಭೂಸ್ವಾಧೀನ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಕಾಯ್ದೆ 2013ರ ಕಲಂ 16(3)ರಡಿ ತಯಾರಿಸಲಾದ ಗಣತಿ ಯಾದಿಯಲ್ಲಿ ಒಟ್ಟು ಕ್ಷೇತ್ರ 01ಎ-14ಗುಂ ಕ್ಷೇತ್ರದಲ್ಲಿ ಜಮೀನು ಸ್ವಾಧೀನಕ್ಕೆ ಒಳಪಡುತ್ತಿದ್ದು, ಈ ಪೈಕಿ ಒಟ್ಟು 3 ಕುಟುಂಬಗಳು ಬಾಧಿತಗೊಳ್ಳುತ್ತಿರುವುದರಿಂದ ನೂತನ ಭೂಸ್ವಾಧೀನ ಕಾಯ್ದೆರಂತೆ ಪುನರ್ವಸತಿ ಪುನರ್‌ನಿರ್ಮಾಣದ ಕ್ರಿಯಾ ಯೋಜನೆಯನ್ನು ತಯಾರಿಸಿರುತ್ತಾರೆ. ಈ ಕುಟುಂಬಗಳು ಜೀವನೋಪಾಯಕ್ಕೆ ನಷ್ಟ ಹೊಂದುವುದಿಲ್ಲ ಎಂಬುವುದನ್ನು ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ ಪುನರ್ವಸತಿ ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರವರು ಕೂಲಂಕುಷವಾಗಿ ಪರಿಶೀಲಿಸಿ ನೂತನ ಕಾಯ್ದೆರಡಿ ಕಲಂ 16(6)ರಡಿ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆಯು ಕರಡು ಯಾದಿಯನ್ನು ತಯಾರಿಸಿ ಕಲಂ 18 ರಡಿ ಅನುಮೋದನೆಗಾಗಿ ಶಿಫಾರಸ್ಸು ಮಾಡಿದ್ದಾರೆ.

ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ ಪುನರ್ವಸತಿ ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರವರು ಶಿಫಾರಸ್ಸು ಮಾಡಿರುವ ಯಾದಿಯನ್ನು ಆಧರಿಸಿ, ನೂತನ ಭೂಸ್ವಾಧೀನ ಕಾಯ್ದೆ 2013ರ ಕಲಂ 84 ರನ್ವಯ ಸೌಲಭ್ಯ ಪಡೆಯುವ ಕುಟುಂಬವು ಸುಳ್ಳು ಮಾಹಿತಿ ನೀಡಿದಲ್ಲಿ ಕಲಂ 84 (1) (2) ಹಾಗೂ (3) ರನ್ವಯ ಶಿಕ್ಷೆಗೆ ಗುರಿಪಡಿಸಲಾಗುವುದೆಂಬ ಷರತ್ತಿಗೆ ಒಳಪಟ್ಟು ಪುನರ್‌ವ್ಯವಸ್ಥೆ ಯೋಜನೆಯ ಪ್ರಸ್ತಾವನೆಯನ್ನು ನೂತನ ಕಾಯ್ದೆ ಕಲಂ 18ರಡಿ ಅನುಮೋದಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಆಯುಕ್ತರು,
ಪುಪು ಮತ್ತು ಭೂಸ್ವಾಧೀನ, ಕೃಮೇಯೋ,
ಹಾಗೂ ಪದನಿಮಿತ್ತ ಸರಕಾರದ ಕಾರ್ಯದರ್ಶಿಗಳು,
ಕರ್ನಾಟಕ ಸರಕಾರ, ಕಂದಾಯ ಇಲಾಖೆ,
ನವನಗರ, ಬಾಗಲಕೋಟ.

ಇವರಿಗೆ:

1) ಜಿಲ್ಲಾಧಿಕಾರಿಗಳು ಬೆಳಗಾವಿ ಜಿಲ್ಲೆ ಇವರಿಗೆ ಮಾಹಿತಿ ಕುರಿತು ಕಳುಹಿಸಿದೆ.
2) ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ ಪುನರ್ವಸತಿ ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರರಿಗೆ ಮಾಹಿತಿ ಕುರಿತು ಕಳುಹಿಸಿದೆ.
3) ವಿಶೇಷ ಭೂಸ್ವಾಧೀನಾಧಿಕಾರಿಗಳು, ಹಿಪ್ಪರಗಿ ಆಣೆಕಟ್ಟು ಯೋಜನೆ, ಅಥಣಿ ಇವರಿಗೆ ಅನುಮೋದಿತ ಪ್ರಸ್ತಾವನೆಯೊಂದಿಗೆ ಸೂಕ್ತ ಕ್ರಮಕ್ಕಾಗಿ
6) ಉಪ ವಿಭಾಗಾಧಿಕಾರಿಗಳು, ಚಿಕ್ಕೋಡಿ ಇವರಿಗೆ ಮಾಹಿತಿಗಾಗಿ.
7) ತಹಶೀಲ್ದಾರರು, ಅಥಣಿ ಇವರ ಮಾಹಿತಿಗಾಗಿ.
8) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮದಬಾವಿ ತಾಲೂಕ ಅಥಣಿ ಇವರಿಗೆ.
9) Web site: www.bagalkot.nic.in/ukp. ಅಂತರಜಾಲದಲ್ಲಿ ಅಳವಡಿಸಲು ಸಿಸ್ಟಂ ಮ್ಯಾನೇಜರ್, ಕಂಪ್ಯೂಟರ್ ವಿಭಾಗ, ಪು ಮತ್ತು ಪು, ಕೃಮೇಯೋ, ನವನಗರ, ಬಾಗಲಕೋಟ ಇವರಿಗೆ.
10) ಭೂಸ್ವಾಧೀನ ವಿಭಾಗಕ್ಕೆ.